All India Radio: Bangalore
Regional Bulletin In Kannada
14.07.2026 / 6.40 p.m.

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

14.07.2026 / 6.40 p.m.

<><><><>

ಮುಖ್ಯಾಂಶಗಳು

- ನವದೆಹಲಿಯಲ್ಲಿ ನಾಳೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆ; ರಾಜ್ಯದ ವಾಸ್ತವ ಸ್ಥಿತಿ ಮಂಡಿಸಲು ಸರ್ಕಾರ ನಿರ್ಧಾರ
- ನಾಡಗೀತೆಯಲ್ಲಿ ಬದಲಾವಣೆಗೆ ಡಾ.ಪುರುಷೋತ್ತಮ ಬಿಳಿಮಲೆ ಸಮಿತಿ, ಸರ್ಕಾರಕ್ಕೆ ಶಿಫಾರಸ್ಸು; ಬೌದ್ಧಧರ್ಮದ ಹೆಸರು ಸೇರ್ಪಡೆಗೆ ಸಲಹೆ
- ಬಿಡದಿ ಟೌನ್‌ಶಿಪ್ ವಿವಾದ; ಶಾಂತಿಯುತ ಪ್ರತಿಭಟನೆಗೆ ಸರ್ಕಾರದ ಅಭ್ಯಂತರವಿಲ್ಲ- ಉಪಮುಖ್ಯಮಂತ್ರಿ ಸ್ಪಷ್ಟನೆ
- ಜಿಬಿಎ ವ್ಯಾಪ್ತಿಯಲ್ಲಿ ಅನಧಿಕೃತ ಜಾಹಿರಾತು ತೆರವುಗೊಳಿಸುವಂತೆ ಸಚಿವ ಕೃಷ್ಣಬೈರೇಗೌಡ ಸೂಚನೆ
- ಫಿಫಾ ವಿಶ್ವಕಪ್ ಹಿನ್ನೆಲೆ; ಬೆಂಗಳೂರಿನಲ್ಲಿ ಮಧ್ಯರಾತ್ರಿ ೩.೩೦ರವರೆಗೆ ಹೋಟೆಲ್, ರೆಸ್ಟೋರೆಂಟ್‌ಗಳಲ್ಲಿ ಆಹಾರ ಸೇವೆಗೆ ಅವಕಾಶ

<><><><>

ನವದೆಹಲಿಯಲ್ಲಿ ನಾಳೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕಾವೇರಿ ನೀರು ನಿಯಂತ್ರಣ ಸಮಿತಿ ಸಭೆ ನಡೆಯಲಿದೆ. ಈ ಸಭೆಯಲ್ಲಿ ರಾಜ್ಯದ ಅಧಿಕಾರಿಗಳು ರಾಜ್ಯದ ವಸ್ತುಸ್ಥಿತಿಯನ್ನು, ಕುಡಿಯುವ ನೀರು ಹಾಗೂ ಬೆಳೆಗಳ ಪರಿಸ್ಥಿತಿಯನ್ನು ಸಮರ್ಥವಾಗಿ ಮಂಡಿಸಲಿದ್ದಾರೆ. ಸಭೆಯ ಬಳಿಕ ನಾಲೆಗಳಿಗೆ ನೀರು ಬಿಡುವ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳುವುದಾಗಿ ಮಾಜಿ ಸಚಿವ ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಬೆಳೆದು ನಿಂತಿರುವ ಕಬ್ಬಿಗೆ ಹಾಗೂ ಕೆರೆ-ಕಟ್ಟೆಗಳಿಗೆ ನೀರು ಬಿಡಬೇಕು ಎಂಬ ರೈತರ ಬೇಡಿಕೆ ನ್ಯಾಯಯುತವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಸಂಕಷ್ಟದ ಸಮಯದಲ್ಲಿ ರೈತರ ಪರವಾಗಿ ನಿಲ್ಲುವುದು ಪ್ರತಿಯೊಬ್ಬ ಜನಪ್ರತಿನಿಧಿಯ ಕರ್ತವ್ಯ. ರೈತರ ಹಿತ ಕಾಯುವುದು ಮೊದಲ ಆದ್ಯತೆ ಎಂದು ಸ್ಪಷ್ಟಪಡಿಸಿದ್ದಾರೆ. ಆದರೆ ಈ ವರ್ಷ ನಿರೀಕ್ಷಿತ ಮಟ್ಟದಲ್ಲಿ ಮಳೆಯಾಗದೆ ಜಲಾಶಯಗಳಲ್ಲಿ ನೀರಿನ ಕೊರತೆಯಾಗಿದೆ. ಇಂತಹ ಸಂದರ್ಭದಲ್ಲಿ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಎಚ್ಚರಿಕೆ ವಹಿಸುವುದು ಕೂಡ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ. ಜಿಲ್ಲೆಯ ರೈತರು,

ಪರಿಸ್ಥಿತಿಯ ಗಂಭೀರತೆಯನ್ನು ಅರ್ಥ ಮಾಡಿಕೊಂಡು ಸರ್ಕಾರದ ಜೊತೆ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

<><><>

ರಾಷ್ಟ್ರಕವಿ ಕುವೆಂಪು ವಿರಚಿತ ನಾಡಗೀತೆಯಲ್ಲಿ ಬೌದ್ಧಧರ್ಮದ ಹೆಸರನ್ನು ಸೇರಿಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಡಾ.ಪುರುಷೋತ್ತಮ ಬಿಳಿಮಲೆ ಸಮಿತಿಯು ಶಿಫಾರಸ್ತು ಮಾಡಿದ್ದು, ಸರ್ಕಾರಕ್ಕೆ ಮನವಿ ಸಲ್ಲಿಸಿದೆ. ಆಕಾಶವಾಣಿಯೊಂದಿಗೆ ಈ ಕುರಿತಂತೆ ಮಾಹಿತಿ ಹಂಚಿಕೊಂಡಿರುವ ಪುರುಷೋತ್ತಮ ಬಿಳಿಮಲೆ ಅವರು, ಧರ್ಮ, ಸಮಾನತೆ ಮತ್ತು ಬೌದ್ಧಧರ್ಮದ ಪ್ರಭಾವ ಹೆಚ್ಚಾದ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಕುವೆಂಪು ಅವರು ಬರೆದಿದ್ದ ನಾಡಗೀತೆಯಲ್ಲಿ ಬೌದ್ಧಧರ್ಮದ ಹೆಸರನ್ನು ಕೈಬಿಡಲಾಗಿತ್ತು. ಪ್ರಸ್ತುತ ಹಾಡಿನಲ್ಲಿ ಜೈನರ ಪೂಜ್ಯ ಉದ್ಯಾನ ಎಂಬ ಸಾಲಿದೆ. ಇನ್ನುಮುಂದೆ ಈ ಸಾಲನ್ನು ಜೈನ ಬೌದ್ಧರ ಪೂಜ್ಯ ಉದ್ಯಾನ ಅಥವಾ ಜೈನರುದ್ಯಾನ ಜೊತೆಗೆ ಬೌದ್ಧರುದ್ಯಾನ ಎಂದು ಬದಲಾಯಿಸಲು ಪ್ರಸ್ತಾಪ ಸಲ್ಲಿಸಲಾಗಿದೆ ಎಂದು ಹೇಳಿದ್ದಾರೆ.

<><><>

ಬಿಡದಿ ಟೌನ್‌ಶಿಪ್ ಸಮೀಕ್ಷೆ ವೇಳೆ ಅಧಿಕಾರಿಗಳ ಮೇಲೆ ನಡೆದ ಹಲ್ಲೆ ಪ್ರಕರಣ ರಾಜಕೀಯ ಪ್ರೇರಿತವಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾನೂನಾತ್ಮಕವಾಗಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸುವುದು, ಮನವಿ ಸಲ್ಲಿಸುವುದು, ಇಲ್ಲವೆ ಶಾಂತಿಯುತ ಪ್ರತಿಭಟನೆ ನಡೆಸುವುದಕ್ಕೆ ಸರ್ಕಾರದ ಅಭ್ಯಂತರವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ರಾಜಕೀಯ ಒತ್ತಡದಿಂದ ಕಾನೂನು ಬಾಹಿರವಾಗಿ ಪ್ರತಿಭಟಿಸಿರುವುದು ಸಾಬೀತಾದಲ್ಲಿ, ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಸಚಿವ ಸಂಪುಟ ವಿಸ್ತರಣೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ರಾಹುಲ್ ಗಾಂಧಿ ವಿದೇಶ ಪ್ರವಾಸದಿಂದ ಆಗಮಿಸಿದ ಬಳಿಕ ಅಗತ್ಯ ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ ಎಂದು ಹೇಳಿದ್ದಾರೆ.

<><><>

ಜಿಬಿಎ ವ್ಯಾಪ್ತಿಯಲ್ಲಿ ಅನಧಿಕೃತ ಜಾಹಿರಾತುಗಳನ್ನು ಮುಲಾಜಿಲ್ಲದೆ ತೆರವುಗೊಳಿಸುವಂತೆ ಜಿಬಿಎ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಜಿಬಿಎ ಪಾಲಿಕೆಗಳ ಕಂದಾಯ ವಿಭಾಗಕ್ಕೆ ಸಂಬಂಧಿಸಿದಂತೆ ಸಭೆ ನಡೆಸಿದ ಅವರು, ಸುಮಾರು ೨೨ ಲಕ್ಷ ಆಸ್ತಿಗಳಿಗೆ ಸರ್ಕಾರದಿಂದಲೇ ಮನೆಮನೆಗೆ ಇ-ಖಾತೆಗಳನ್ನು ವಿತರಿಸಲು ಅಗತ್ಯವಿರುವ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳುವಂತೆ ತಿಳಿಸಿದ್ದಾರೆ. ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆ ಮಾಡುವ ಪ್ರಕ್ರಿಯೆಗೆ ವೇಗ ನೀಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಖಾಲಿ ಜಾಗಗಳಲ್ಲಿ ಬೆಳೆದಿರುವ ಕಳೆ, ಗಿಡಗಂಟಿಗಳು ಹಾಗೂ ತ್ಯಾಜ್ಯವನ್ನು ಸ್ವತ್ತಿನ ಮಾಲಿಕರೇ

ತೆರವುಗೊಳಿಸಲು, ಆಗಸ್ಟ್ ೧೫ರವರೆಗೆ ಕಾಲಾವಕಾಶ ನೀಡಲಾಗುವುದು ಎಂದು ತಿಳಿಸಿದ್ದಾರೆ. ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಿದ ರಸ್ತೆಗಳಲ್ಲಿ ಮತ್ತೆ ಒತ್ತುವರಿ ಮಾಡಿದರೆ, ದುಪ್ಪಟ್ಟು ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಫಿಫಾ ವಿಶ್ವಕಪ್ ಪಂದ್ಯಗಳ ಹಿನ್ನೆಲೆಯಲ್ಲಿ ಬೆಂಗಳೂರು ಪೋಲೀಸರು ನಗರದಲ್ಲಿ ಮಧ್ಯರಾತ್ರಿ ೩-೩೦ರವರೆಗೆ ಹೊಟೇಲ್ ಹಾಗೂ ರೆಸ್ಟೋರೆಂಟ್ ಗಳಲ್ಲಿ ಆಹಾರ ಸೇವೆಗೆ ಅವಕಾಶ ಕಲ್ಪಿಸಿದ್ದಾರೆ. ಭಾರತ ರಾಷ್ಟ್ರೀಯ ರೆಸ್ಟೋರೆಂಟ್ ಸಂಸ್ಥೆ ಮನವಿ ಹಿನ್ನೆಲೆಯಲ್ಲಿ ವಿಶ್ವಕಪ್ ಪಂದ್ಯಗಳು ನಡೆಯಲಿರುವ ಇಂದು ಮತ್ತು ನಾಳೆ ಹಾಗೂ ಇದೇ ೧೯ರಂದು ಈ ಆದೇಶ ಅನ್ವಯವಾಗಲಿದೆ. ಕರ್ನಾಟಕ ಪೊಲೀಸ್ ಕಾಯ್ದೆ ಅನ್ವಯ ತಡರಾತ್ರಿ ಪಂದ್ಯ ಪ್ರದರ್ಶನಕ್ಕೆ ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಆದೇಶ ನೀಡಿದ್ದಾರೆ.

<><><><>

ರಾಜ್ಯ ಸರ್ಕಾರ ಹೋಟೆಲ್ ಉದ್ಯಮಕ್ಕೆ ಪೂರಕವಾದ ನಿಲುವುಗಳನ್ನು ತೆಗೆದುಕೊಳ್ಳುವ ಮೂಲಕ ಈ ಕ್ಷೇತ್ರದ ಬಲವರ್ಧನೆಗೆ ಸಹಕಾರ ನೀಡಬೇಕು ಎಂದು ಕರ್ನಾಟಕ ರಾಜ್ಯ ಹೋಟೆಲ್‌ಗಳ ಸಂಘ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಇಂದು ಮನವಿ ಸಲ್ಲಿಸಿದೆ. ಹೋಟೆಲ್ ಹಾಗೂ ಉಪಹಾರ ಮಂದಿರಗಳ ಹಿತದೃಷ್ಟಿಯಿಂದ ಹಾಗೂ ಉದ್ಯಮ ಸುಗಮವಾಗಿ ಕಾರ್ಯನಿರ್ವಹಿಸುವ ಉದ್ದೇಶದಿಂದ ಸಂಘ ಹಲವು ಬೇಡಿಕೆಗಳನ್ನು ಸರ್ಕಾರದ ಮುಂದಿಟ್ಟಿದೆ. ಪ್ರತಿ ಕೆ.ಜಿ. ಕಸಕ್ಕೆ ೧೨ ರೂಪಾಯಿ ಶುಲ್ಕ ವಿಧಿಸುವ ಪ್ರಸ್ತಾವನೆಯು ಉದ್ಯಮದ ಮೇಲೆ ಅತಿಯಾದ ಆರ್ಥಿಕ ಹೊರೆಯನ್ನು ಉಂಟುಮಾಡುತ್ತದೆ ಎಂದು ಸರ್ಕಾರದ ಗಮನ ಸೆಳೆದಿದೆ. ಜಿಎಸ್‌ಟಿ ನೋಂದಣಿ ಹೊಂದಿರುವ ಹೋಟೆಲ್‌ಗಳಿಗೆ ವಾರ್ಷಿಕವಾಗಿ ವ್ಯಾಪಾರ ಪರವಾನಗಿ ನವೀಕರಿಸುವ ಕಡ್ಡಾಯವನ್ನು ರದ್ದುಪಡಿಸಿ, ಶಾಶ್ವತ  ವ್ಯಾಪಾರ ಪರವಾನಗಿ ನೀಡಲು ವಿನಂತಿ ಮಾಡಿದೆ. 'ಬೆಂಗಳೂರಿನಲ್ಲಿ ಪ್ರಸ್ತುತ ಜಾರಿಯಲ್ಲಿರುವ ರಾತ್ರಿ ೧ ಗಂಟೆಯ ತನಕ ಹೋಟೆಲ್ ಉದ್ಯಮವನ್ನು ನಡೆಸುವ ಅವಕಾಶವನ್ನು ರಾಜ್ಯದ ಇತರೆ ನಗರಗಳಿಗೂ ವಿಸ್ತರಿಸಬೇಕು. ಸರ್ಕಾರದ ಆದೇಶ ಜಾರಿಗೆ ತರಲು ಜಿಲ್ಲಾಡಳಿತಗಳಿಗೆ ಹಾಗು ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಬೇಕು ಎಂದು ನಿಯೋಗ ಮನವಿ ಮಾಡಿದೆ.

<><><><>

ಆಷಾಢ ಶುಕ್ರವಾರದಂದು ಹಾಗೂ ಚಾಮುಂಡೇಶ್ವರಿ ವರ್ಧಂತಿ ದಿನದಂದು ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ದೇವಿಯ ದರ್ಶನಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಜಿ ತಿಳಿಸಿದ್ದಾರೆ. ಇದೇ ೧೭, ೨೪, ೩೧, ಆಗಸ್ಟ್ ೭ ರವರೆಗೆ ೪ ಅಷಾಢ ಶುಕ್ರವಾರ ಹಾಗೂ ಅಗಸ್ಟ್ ೪ ರಂದು ಅಮ್ಮನವರ ವರ್ಧಂತಿ ಜರುಗಲಿದೆ ಎಂದು ಮಾಹಿತಿ ನೀಡಿದ್ದಾರೆ. ಬೆಟ್ಟದ ಪಾದದಿಂದ ಕಾಲ್ನಡಿಗೆಯಲ್ಲಿ ಬರುವವರಿಗೆ ಬೆಳಿಗ್ಗೆ ೫ ಗಂಟೆಯ

ಬಳಿಕ ಪ್ರವೇಶ ಕಲ್ಪಿಸಲಾಗಿದೆ. ಶಿಷ್ಟಾಚಾರದಡಿ ಬರುವ ಗಣ್ಯರಿಗೆ, ವಿ.ಐ.ಪಿ ಗಳಿಗೆ ಬೆಳಿಗ್ಗೆ ೫.೩೦ ರಿಂದ ೧೦ ಗಂಟೆಯವರೆಗೆ ಮಾತ್ರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ೧೦ ಗಂಟೆಯ ನಂತರ ಎಲ್ಲಾ ಗಣ್ಯರ ವಾಹನಗಳ ಪ್ರವೇಶವನ್ನು ಚಾಮುಂಡಿ ಬೆಟ್ಟಕ್ಕೆ ನಿರ್ಬಂಧಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಅಷಾಢ ಮಾಸದ ಶುಕ್ರವಾರ, ಚಾಮುಂಡೇಶ್ವರಿ ವರ್ಧಂತಿ ದಿನಗಳಂದು ಚಾಮುಂಡಿ ಬೆಟ್ಟಕ್ಕೆ ಖಾಸಗಿ ವಾಹನಗಳ ಪ್ರವೇಶವನ್ನು ಸಂಪೂರ್ಣವಾಗಿ ನಿರ್ಭಂಧಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

ಕಲಬುರಗಿ ಜೈಲಿನಿಂದ ಇಂದು ಮುಂಜಾನೆ ಮೂವರು ಅಪರಾಧಿಗಳು ಪರಾರಿಯಾಗಿದ್ದಾರೆ. ಅಪರಾಧಿಗಳ ಪತ್ತೆಗೆ ಡಿಸಿಪಿ ನೇತೃತ್ವದಲ್ಲಿ ಮೂವರು ಎಸಿಪಿಗಳ ನೇತೃತ್ವದ ತಂಡಗಳನ್ನು ರಚಿಸಲಾಗಿದೆ ಎಂದು ಕಲಬುರಗಿ ನಗರ ಪೊಲೀಸ್ ಆಯುಕ್ತ ಶರಣಪ್ಪ ಎಸ್.ಡಿ ತಿಳಿಸಿದ್ದಾರೆ. ಹಿರಿಯ ಅಧಿಕಾರಿಗಳೊಂದಿಗೆ ಇಂದು ಜೈಲಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ಅವರು, ಮೂವರು ಅಪರಾಧಿಗಳು, ಬೇರೆ ಬೇರೆ ಪ್ರಕರಣಗಳಲ್ಲಿ ಶಿಕ್ಷೆಗೆ ಗುರಿಯಾಗಿದ್ದರು.

<><><>

ಇನ್ನು ಹವಾವರ್ತಾಮಾನ...

ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡುವಿನಲ್ಲಿ ನೈಋತ್ಯ ಮುಂಗಾರು ದುರ್ಬಲವಾಗಿತ್ತು. ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗಾಳಿಯೊಂದಿಗೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಗರಿಷ್ಠ ತಾಪಮಾನ ಸಾಮಾನ್ಯಕ್ಕಿಂತ ೩ ರಿಂದ ೪ ಡಿಗ್ರಿ ಸೆಲ್ಸಿಯಸ್‌ನಷ್ಟು ಹೆಚ್ಚಿರುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮುನ್ಸೂಚನೆಯಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಮುಂದಿನ ದಿನಗಳಲ್ಲಿ ಮುಂಗಾರು ಮಳೆ ಚುರುಕಾಗಲಿದೆ. ಕರಾವಳಿ ಜಿಲ್ಲೆಗಳಲ್ಲಿ ಮುಂಗಾರು ಮಾರುತಗಳು ಸಕ್ರಿಯವಾಗಿದ್ದು, ಮುಂದಿನ ದಿನಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ.

<><><>

ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಮುಂದುವರಿದಿದೆ. ಗದಗ ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ನಿಖರವಾಗಿ ಮತ್ತು ಪಾರದರ್ಶಕವಾಗಿ ನಡೆಸಬೇಕೆಂದು ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಶೇಕಡ ೯೯.೪೭ ಗಣತಿ ನಮೂನೆ ಮತದಾರರಿಗೆ ವಿತರಿಸಲಾಗಿದೆ. ಶೇಕಡ.೪೭.೮ ರಷ್ಟು ಮಾಹಿತಿ ಗಣಕೀಕರಣ ಮಾಡಲಾಗಿದೆ ಎಂದು

ಜಿಲ್ಲಾಧಿಕಾರಿ ಡಾ.ಕೆ ಎನ್ .ಅನುರಾಧ  ತಿಳಿಸಿದ್ದಾರೆ. ಎಸ್‌ಐಆರ್‌ನಲ್ಲಿ ಎಲ್ಲಾ ಮತದಾರರು ತಪ್ಪದೇ ಭಾಗವಹಿಸುವಂತೆ ಮೈಸೂರಿನ ಹೆಚ್.ಡಿ.ಕೋಟೆ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ರವಿಚಂದ್ರ ಎಸ್ ಮನವಿ ಮಾಡಿದ್ದಾರೆ. ಉತ್ತರಕನ್ನಡ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿಯಿಂದ ವತಿಯಿಂದ ಉತ್ತರಕನ್ನಡ ಜಿಲ್ಲೆಯ ಮುಂಡಗೋಡದಲ್ಲಿ ವಾರದ ಸಂತೆ ಮಾರುಕಟ್ಟೆ ಮತ್ತು ಗ್ರಾಮೀಣ ಭಾಗದ ಮಾರುಕಟ್ಟೆಯಲ್ಲಿ  ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ - ೨೦೨೬ರ ಅಂಗವಾಗಿ  ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬಾಗಲಕೋಟೆ ಜಿಲ್ಲೆಯ ಅರ್ಹ ರೈತರೆಲ್ಲರೂ ಫಸಲ್ ಬಿಮಾ ಯೋಜನೆಯ ವ್ಯಾಪ್ತಿಗೆ ಒಳಪಡುವಂತೆ ಗ್ರಾಮ ಮಟ್ಟದಲ್ಲಿ ಜಾಗೃತಿ ಮೂಡಿಸಿ, ರೈತರನ್ನು ಮನವೊಲಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>